# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 984

ಸದಸ್ಯರ ಹೆಸರು : ಶ್ರೀ ತಿಪ್ಪಣ್ಣಪ್ಪ ಕಮಕನೂರ

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 20.08.2025

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಕ್ಕೆ (ಕೆಕೆಆರ್‌ಟಿಸಿ) ಕೇಂದ್ರ ಸರ್ಕಾರವು ಪಿ.ಎ.ಎಂ.ಇ. ಸೇವಾ ಯೋಜನೆಯಡಿ ಎಷ್ಟು ಇ-ಬಸ್‌ಗಳನ್ನು ಮಂಜೂರು ಮಾಡಿದೆ; | ಭಾರತ ಸರ್ಕಾರದ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯವು (MoHUA) 'PM-eBus Sewa ಯೋಜನೆಯನ್ನು ಕೈಗೆತ್ತಿಕೊಂಡಿರುತ್ತದೆ. ಭಾರತ ಸರ್ಕಾರವು ಸದರಿ ಇ-ಬಸ್ ಕಾರ್ಯಾಚರಣೆಗೆ MoHUA ಮೂಲಕ CESL (Convergence Energy Services Ltd.) ರವರು ಒಟ್ಟು ವೆಚ್ಚದ ಒಪ್ಪಂದ (GCC-wet lease) - ಮಾದರಿಯ ಮೇಲೆ ಕೇಂದ್ರ ಸರ್ಕಾರವೇ ಟೆಂಡರ್ ಪ್ರಕ್ರಿಯೆ ನಡೆಸುತ್ತದೆ.<br><br>ಕರ್ನಾಟಕ ರಾಜ್ಯಕ್ಕೆ ಕೇಂದ್ರ ಸರ್ಕಾರದ PM e-bus sewa ಯೋಜನೆಯಡಿ ಒಟ್ಟು 750 ವಿದ್ಯುತ್ ಚಾಲಿತ ಬಸ್ಸುಗಳು ಮಂಜೂರಾಗಿದ್ದು, ಅದರಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಕಲಬುರಗಿ, ಬಳ್ಳಾರಿ ಹಾಗೂ ವಿಜಯಪುರ ನಗರಗಳಿಗೆ ಕ್ರಮವಾಗಿ 100, 50 ಹಾಗೂ 50 ರಂತೆ ಒಟ್ಟು 200 ವಿದ್ಯುತ್ ಚಾಲಿತ ಬಸ್‌ಗಳು ಮಂಜೂರಾಗಿದ್ದು, Convergence Energy Services Limited (CESL) ರವರಿಂದ ಕ್ರೋಢೀಕೃತ ಪ್ರಮಾಣಕ್ಕೆ ಟೆಂಡರ್ ಕರೆಯುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. |
| ಆ. | ಈ ಇ-ಬಸ್ಸುಗಳನ್ನು ಈ ಜಿಲ್ಲೆಗಳ ಯಾವ ಯಾವ ನಗರ ಪ್ರದೇಶಗಳಿಗೆ ಹಂಚಿಕೆ ಮಾಡಲು ಕ್ರಮಕೈಗೊಳ್ಳಲಾಗುವುದು; | |
| ಇ. | ಈ ಭಾಗದಲ್ಲಿ ಕೊರತೆ ಇರುವ ಬಸ್ಸುಗಳ ಸಂಖ್ಯೆಯನ್ನು ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಕ್ಕೆ 2023-24 ಹಾಗೂ 2024-25ನೇ ಸಾಲಿನಲ್ಲಿ ಇದುವರೆಗೆ ಒಟ್ಟು 1031 ವಿವಿಧ ಮಾದರಿಯ ಹೊಸ ಬಸ್‌ಗಳನ್ನು ಖರೀದಿಸಲಾಗಿದೆ. ಅಲ್ಲದೆ ಪ್ರಸಕ್ತ ಸಾಲಿನಲ್ಲಿ 123 ನಗರ ಸಾರಿಗೆ ಬಸ್‌ಗಳನ್ನು ಖರೀದಿಸಲಾಗುತ್ತಿದ್ದು, ಈಗಾಗಲೇ ಖರೀದಿ ಆದೇಶ ನೀಡಲಾಗಿರುತ್ತದೆ. ಇದಲ್ಲದೆ 56 (20 ಹವಾ ನಿಯಂತ್ರಿತ ಸ್ಲೀಪರ್, 20 ಹವಾ ನಿಯಂತ್ರಣವಲ್ಲದ ಸ್ಲೀಪರ್ ಹಾಗೂ 16 ಹವಾನಿಯಂತ್ರಿತ ಸೀಟರ್) ಬಸ್ಸುಗಳನ್ನು ಕೂಡ ಖರೀದಿಸಲಾಗುತ್ತಿದ್ದು ಇದು ಈ ಭಾಗದ ಸಾರ್ವಜನಿಕರ ಅವಶ್ಯಕತೆಗನುಗುಣವಾಗಿರುತ್ತದೆ. |

ಸಂಖ್ಯೆ: ಟಿಡಿ 186 ಟಿಸಿಕ್ಯೂ 2025

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು